## ಕರ್ನಾಟಕ ವಿಧಾನ ಪರಿಷತ್

1. ಸದಸ್ಯರ ಹೆಸರು : ಶ್ರೀ. ಪ್ರತಾಪ್ ಸಿಂಹ ನಾಯಕ್. ಕೆ (ವಿಧಾನಸಭೆಯಿಂದ ಚುನಾಯಿತರಾದವರು)
2. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 340 (440)
3. ಉತ್ತರಿಸಬೇಕಾದ ದಿನಾಂಕ : 22.12.2022
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು
5.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ನಗದು ರಹಿತ ವೈದ್ಯಕೀಯ ಸೇವೆ ಕಲ್ಪಿಸುವ ಯೋಜನೆ ಜಾರಿಯಾಗಿದೆಯೇ; | ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದುರಹಿತ ವೈದ್ಯಕೀಯ ಸೌಲಭ್ಯ ಕಲ್ಪಿಸಲು ನೂತನ "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ" (KASS) ಯನ್ನು ರಾಜ್ಯ ಸರ್ಕಾರವು ರೂಪಿಸುತ್ತಿದ್ದು, ಸದರಿ ಕಾರ್ಯವು ಪ್ರಗತಿಯಲ್ಲಿದೆ. |
| ಆ) | ಸದರಿ ಯೋಜನೆಯಡಿಯಲ್ಲಿ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ಸಿಗುವ ವೈದ್ಯಕೀಯ ಸೇವೆಗಳು ಮತ್ತು ಸೌಲಭ್ಯಗಳ ವಿವರಗಳೇನು; | "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ" ಅಡಿ ನಗದುರಹಿತ ವೈದ್ಯಕೀಯ ಚಿಕಿತ್ಸೆಯನ್ನು ಒದಗಿಸಲು ಉದ್ದೇಶಿಸಲಾಗಿದ್ದು, ಈ ಯೋಜನೆಯ ಕಾರ್ಯನೀತಿಗಳು (Policy Framework) ವಿಸ್ತೃತವಾಗಿರುತ್ತದೆ. ಅವುಗಳನ್ನು ಒಳಗೊಂಡಂತೆ ವೈದ್ಯಕೀಯ ಸೇವೆಗಳ ವಿವರ, ಪರಿಣಾಮಕಾರಿ ಅನುಷ್ಠಾನ ಹಾಗೂ ಉತ್ಕೃಷ್ಟ ವೈದ್ಯಕೀಯ ಸೇವೆ ಸಕಾಲದಲ್ಲಿ ಲಭ್ಯವಾಗುವ ನಿಟ್ಟಿನಲ್ಲಿ ರೂಪುರೇಷೆಗಳನ್ನು ಮತ್ತು ಕೆಲವೊಂದು ಆರಂಭಿಕ ಸೂಚನೆಗಳನ್ನು ದಿನಾಂಕ:05.09.2022 ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020 ರಲ್ಲಿ ಒದಗಿಸಲಾಗಿದೆ. |
| ಇ) | ಸದರಿ ಯೋಜನೆಯು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳಲು ಮತ್ತು ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ನಗದು ರಹಿತ ಉತ್ಕೃಷ್ಟ ವೈದ್ಯಕೀಯ ಸೇವೆ ಸಕಾಲದಲ್ಲಿ ಲಭ್ಯವಾಗುವಂತಾಗಲು ಸರ್ಕಾರ ರೂಪಿಸುವ ನಿಯಮ ಹಾಗೂ ಮಾನದಂಡಗಳೇನು? | |

ಇ-ಕಡತ ಸಂಖ್ಯೆ: ಸಿಆಸುಇ 181 ಎಸ್‌ಎಂಆರ್ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAG EESHA, CMO-JS(GJ) JOINT SECREATRY, CMO on 16/12/2022 01:45 PM